ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ		**458 (537)**
ಸದಸ್ಯರ ಹೆಸರು		**ಶ್ರೀ ಅ. ದೇವೇಗೌಡ (ಪದವೀಧರ ಕ್ಷೇತ್ರ)**
ಉತ್ತರಿಸಬೇಕಾದ ದಿನಾಂಕ		**21.02.2022**
ಉತ್ತರಿಸಬೇಕಾದವರು		**ಉನ್ನತ ಶಿಕ್ಷಣ ಸಚಿವರು**
	ಪ್ರಶ್ನೆ	**ಉತ್ತರ**
(ಅ)	ಕರ್ನಾಟಕದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು;	ಕರ್ನಾಟಕದಲ್ಲಿ ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಗೆ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ : 440
(ಆ)	ಸದರಿ ಕಾಲೇಜುಗಳಲ್ಲಿ ಹಾಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳೆಷ್ಟು;	ಸದರಿ ಕಾಲೇಜುಗಳಲ್ಲಿ ಹಾಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳ ಸಂಖ್ಯೆ: 1681
(ಇ)	ಸದರಿ ಕಾಲೇಜುಗಳಲ್ಲಿ ಹಾಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು?	ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 257 ಡಿಸಿಇ 2019 (ಭಾಗ-3) ದಿನಾಂಕ: 08.07.2020 ಹಾಗೂ ತಿದ್ದುಪಡಿ ಅಧಿಸೂಚನೆ ದಿನಾಂಕ: 19.10.2020 ರಲ್ಲಿ ವಿಶೇಷ ನೇಮಕಾತಿ ನಿಯಮಗಳನ್ನು ರೂಪಿಸಲಾಗಿದೆ. ಸಹಾಯಕ ಪ್ರಾಧ್ಯಾಪಕರ 1242 ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 257 ಡಿಸಿಇ 2019, ದಿನಾಂಕ: 26.08.2021 ರಲ್ಲಿ ಅನುಮತಿ ನೀಡಲಾಗಿದೆ. ಅದರಂತೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪ್ರಸ್ತುತ ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಆಯ್ಕೆ ಮಾಡಲು ಅರ್ಜಿಗಳನ್ನು ಆಹ್ವಾನಿಸಿರುತ್ತದೆ. ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿ ಆಯ್ಕೆಪಟ್ಟಿಯನ್ನು ಸರ್ಕಾರಕ್ಕೆ ನೀಡಿದ ನಂತರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು.

ಇಡಿ 60 ಡಿಸಿಇ 2022

(ಡಾ. ಅಶ್ವಥ್ ನಾರಾಯಣ ಸಿ.ಎನ್.)
ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು